## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಿಹಾರ ಹಾಗೂ ಒಡಿಸ್ಸಾ ಮೂಲದ ವಲಸೆ ಕಾರ್ಮಿಕರು ಮಾದನಾಯಕನ ಹಳ್ಳಿ ಅಂತರಾಷ್ಟ್ರೀಯ ವಸ್ತು ಪ್ರದರ್ಶನದ ಮೈದಾನದಲ್ಲಿ ಸೇರಿರುವ ವಲಸೆ ಕಾರ್ಮಿಕರಿಗೆ ಸೂಕ್ತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಕಾಇ 170 ಸ್ವೀಮರ 2018(ಭಾ), ದಿನಾಂಕ: 28-04-2020.

*******

ಪ್ರಸ್ತಾವನೆ:

ಮೇಲೆ ಓದಲಾದ ಉಲ್ಲೇಖ-1ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮೂಲಕ ಆಹಾರ ಧಾನ್ಯಗಳ ಪೊಟ್ಟಣಗಳನ್ನು ವಲಸೆ ಕಟ್ಟಡ ಕಾರ್ಮಿಕರಿಗೆ ವಿತರಿಸಲು ಆದೇಶಿಸಲಾಗಿದೆ.

ಕೋವಿಡ್-19 ತುರ್ತು ಪರಿಸ್ಥಿತಿಯ ಹಿನ್ನಲೆಯಲ್ಲಿ ಬಿಹಾರ ಹಾಗೂ ಒಡಿಸ್ಸಾ ಮೂಲದ ವಲಸೆ ಕಾರ್ಮಿಕರು ಮಾದನಾಯಕನ ಹಳ್ಳಿ ಅಂತರಾಷ್ಟ್ರೀಯ ವಸ್ತು ಪ್ರದರ್ಶನದ ಮೈದಾನದಲ್ಲಿ ಸೇರಿದ್ದು, ವಿಶೇಷ ರೈಲಿಗೆ ಆಗ್ರಹಿಸುತ್ತಿದ್ದಾರೆ. ಸದರಿ ವಲಸೆ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯ ವತಿಯಿಂದ ಸೂಕ್ತ ಸೌಲಭ್ಯಗಳನ್ನು ಒದಗಿಸುವ ತುರ್ತು ಅಗತ್ಯತೆ ಇದೆ. ಈ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ ಕಾಇ 170 ಸ್ವೀಮರ 2018(ಭಾ), ಬೆಂಗಳೂರು, ದಿನಾಂಕ: 05-05-2020

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

1. ಸದರಿ ಕಟ್ಟಡ ಕಾರ್ಮಿಕರಲ್ಲಿ ಬೆಂಗಳೂರಿನಲ್ಲಿಯೇ ಇರಲು ಇಚ್ಛಿಸುವ ವಲಸೆ ಕಾರ್ಮಿಕರಿಗೆ ಆಹಾರ ಧಾನ್ಯಗಳ ಪೊಟ್ಟಣಗಳನ್ನು (ರೇಷನ್ ಕಿಟ್) ಪ್ರತಿ ಕಾರ್ಮಿಕರಿಗೆ ಎರಡು ಕಿಟ್‌ಗಳಂತೆ ನಾಲ್ಕು ವಾರಗಳಿಗೆ ಸಾಕಾಗುವಷ್ಟು ಆಹಾರ ಧಾನ್ಯಗಳ ಪೊಟ್ಟಣಗಳನ್ನು ನೀಡುವುದು. 3,000 ರಷ್ಟು ರೇಷನ್ ಕಿಟ್‌ಗಳನ್ನು ಅಥವಾ ಕಟ್ಟಡ ಕಾರ್ಮಿಕರ ಅಗತ್ಯಕ್ಕನುಗುಣವಾಗಿ ನೀಡುವುದು.

2. ವಾಪಸ್ಸು ಹೋಗಲಿಚ್ಛಿಸುವ ವಲಸೆ ಕಟ್ಟಡ ಕಾರ್ಮಿಕರಿಗೆ ಕುಡಿಯುವ ನೀರು / ತಾತ್ಕಾಲಿಕ ಶೌಚಾಲಯ ವ್ಯವಸ್ಥೆ / ಊಟದ ವ್ಯವಸ್ಥೆ / ಅಗತ್ಯವಿರುವ ಔಷಧಗಳ ವ್ಯವಸ್ಥೆ / ಜ್ವರವನ್ನು ತಪಾಸಣೆ ಮಾಡುವ ವ್ಯವಸ್ಥೆ / ಸೊಳ್ಳೆಗಳಿಂದ ರಕ್ಷಣೆ ಪಡೆಯಲು odomos ಇತ್ಯಾದಿ ಅಗತ್ಯ ವಸ್ತುಗಳನ್ನು ನೀಡುವುದು. ಇದಕ್ಕೆ ತಗಲುವ ವೆಚ್ಚವನ್ನು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಭರಿಸುವುದು.

3. ಶ್ರೀ ವಿಕಾಸ್ ಕುಮಾರ್ ವಿಕಾಸ್, ಐ.ಪಿ.ಎಸ್ DIG, ANF ಅಧಿಕಾರಿ ಇವರು ಮಾದನಾಯಕನ ಹಳ್ಳಿ ಅಂತರಾಷ್ಟ್ರೀಯ ವಸ್ತು ಪ್ರದರ್ಶನದ ಮೈದಾನದಲ್ಲಿ ಸೇರಿರುವ ಬಿಹಾರ್ ಮೂಲದ ಕಾರ್ಮಿಕರ ಸಮಸ್ಯೆಗಳಿಗೆ ಇವರು ಏಕಮಾತ್ರ ಸಮನ್ವಯ ಅಧಿಕಾರಿಯಾಗಿರುತ್ತಾರೆ. ಕಾರ್ಮಿಕ ಇಲಾಖೆಯ ಎಲ್ಲಾ ಅಧಿಕಾರಿಗಳು ಸದರಿ ಅಧಿಕಾರಿಯವರಿಗೆ ಎಲ್ಲಾ ಸಹಾಯ / ಸಹಕಾರಗಳನ್ನು ನೀಡುವುದು.

4. ಕಾರ್ಮಿಕ ಇಲಾಖೆಗೆ ಸಂಬಂಧಿಸಿದಂತೆ, ಈ ಕಾರ್ಮಿಕರ ಕುರಿತಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಆಯುಕ್ತರು, ಕಾರ್ಮಿಕ ಇಲಾಖೆ, ಶ್ರೀ ಮಂಜುನಾಥ್, ಅಪರ ಕಾರ್ಮಿಕ ಆಯುಕ್ತರು ಹಾಗೂ ಶ್ರೀ ನರಸಿಂಹ ಮೂರ್ತಿ, ಅಪರ ಕಾರ್ಮಿಕ ಆಯುಕ್ತರು ಇವರುಗಳು ಎಲ್ಲಾ ಸೂಕ್ತ ಕ್ರಮಗಳನ್ನು ಕೈಗೊಳ್ಳವುದು.

ಇದಕ್ಕೆ ಸಂಬಂಧಪಟ್ಟ ವಿಷಯಗಳನ್ನು ಅತ್ಯಂತ ಆದ್ಯತೆಯ ಮೇರೆಗೆ ಪರಿಗಣಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಂಧ್ಯಾ ಎಲ್ ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ

ಇವರಿಗೆ,

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
2. ಶ್ರೀಮತಿ ವಿ. ಚೈತ್ರ, ಭಾ.ಆ.ಸೇ., ವಿಶೇಷ ನೋಡಲ್ ಅಧಿಕಾರಿ, (ಕೋವಿಡ್-19) ಕಾರ್ಮಿಕ ಇಲಾಖೆ, ಬೆಂಗಳೂರು.
3. ಶ್ರೀ ವಿಕಾಸ್ ಕುಮಾರ್ ವಿಕಾಸ್, ಐ.ಪಿ.ಎಸ್ DIG, ANF, ಕಾರ್ಮಿಕ ಆಯುಕ್ತಾಲಯದ ಮೂಲಕ.
4. ಕಾರ್ಯದರ್ಶಿ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
5. ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕೆ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಕಾರ್ಮಿಕ ಭವನ, ಬೆಂಗಳೂರು.
6. ಅಪರ ಕಾರ್ಮಿಕ ಆಯುಕ್ತರು (ಆಡಳಿತ ಮತ್ತು ಲೆಕ್ಕಪತ್ರ), ಕಾರ್ಮಿಕ ಭವನ, ಬೆಂಗಳೂರು.
7. ಅಪರ ಕಾರ್ಮಿಕ ಆಯುಕ್ತರು (ಕೈಗಾರಿಕಾ ಬಾಂದವ್ಯ) ಕಾರ್ಮಿಕ ಭವನ, ಬೆಂಗಳೂರು.
8. ಜಂಟಿ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಕಲ್ಯಾಣ ಸುರಕ್ಷಾ ಭವನ, 3ನೇ ಮಹಡಿ, ಐಟಿಐ ಆವರಣ, ಡೈರಿ ಸರ್ಕಲ್, ಬೆಂಗಳೂರು-29.
9. ಕಲ್ಯಾಣ ಆಯುಕ್ತರು, ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಕಾರ್ಮಿಕ ಕಲ್ಯಾಣ ಭವನ, ನಂ. 48, 2ನೇ ಮಹಡಿ, ಮತ್ತಿಕೆರೆ ಮುಖ್ಯ ರಸ್ತೆ, (ಆರ್.ಟಿ.ಓ. ಹತ್ತಿರ), ಯಶವಂತಪುರ, ಬೆಂಗಳೂರು.
10. ಎಲ್ಲಾ ಜಂಟಿ/ಉಪ ಕಾರ್ಮಿಕ ಆಯುಕ್ತರು/ಸಹಾಯಕ ಕಾರ್ಮಿಕ ಆಯುಕ್ತರು/ಕಾರ್ಮಿಕ ಅಧಿಕಾರಿಗಳು/ ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರು (ಕಾರ್ಮಿಕ ಆಯುಕ್ತಾಲಯದ ಮೂಲಕ)
11. ಶ್ರೀ ಎಸ್.ಎಸ್.ಪ್ರಕಾಸಂ, ಅಧ್ಯಕ್ಷರು, ಕರ್ನಾಟಕ ಕನ್‌ಸ್ಟ್ರಕ್ಷನ್ ವರ್ಕರ್ಸ್ ಯೂನಿಯನ್ (ರಿ), ನಂ.6, ಸೋನಿ ಬಿಲ್ಡಿಂಗ್, ಗಂಗಮ್ಮ ಸರ್ಕಲ್, ಜಾಲಹಳ್ಳಿ ಪೋಸ್ಟ್, ಬೆಂಗಳೂರು-560013. ಇ-ಮೇಲ್ ವಿಳಾಸ:ssprakasam09@gmail.com.
12. ಶ್ರೀ ಮೀನಾಕ್ಷಿಸುಂದರಂ, ಜನರಲ್ ಸೆಕರೆಟರಿ, ಸಿಐಟಿಯು, ನಂ.40/5, 2ನೇ ಬಿ ಮುಖ್ಯ, 16ನೇ ಕ್ರಾಸ್, ಎಸ್.ಆರ್.ನಗರ, ಬೆಂಗಳೂರು.560027. ಇ-ಮೇಲ್ ವಿಳಾಸ:meenaxims@gmail.com.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ ವಿಕಾಸ ಸೌಧ, ಬೆಂಗಳೂರು
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.